## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 531 (590)
ಮಾನ್ಯ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ
(ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 11.12.2025
ಉತ್ತರಿಸುವವರು : ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ವಿವಿಧ ಇಲಾಖೆಯಡಿ ಬರುವ ಒಟ್ಟು ನಿಗಮ, ಮಂಡಳಿಗಳು ಎಷ್ಟು; ಹಾಗೂ ಅವು ಯಾವುವು; (ಇಲಾಖಾವಾರು ಮಾಹಿತಿ ನೀಡುವುದು) | ರಾಜ್ಯ ಸರ್ಕಾರದ ವಿವಿಧ ಇಲಾಖೆಯಡಿ ಒಟ್ಟು 100 ನಿಗಮ, ಮಂಡಳಿಗಳಿದ್ದು, ಇಲಾಖಾವಾರು ವಿವರಗಳನ್ನು **ಅನುಬಂಧ-1ರಲ್ಲಿ** ನೀಡಲಾಗಿದೆ. |
| ಆ) | ಈ ನಿಗಮ ಮಂಡಳಿಗಳ ಅಧ್ಯಕ್ಷರಿಗೆ ನಿಗದಿಪಡಿಸಿರುವ ವೇತನ ಸೌಲಭ್ಯ ಹಾಗೂ ಇತರೆ ಭತ್ಯೆಗಳಾವುವು; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ ಡಿಪಿಎ 21 ಎಸ್‌ಪಿಯು 2015, ದಿನಾಂಕ 9-9-2015 ರನ್ವಯ ನಿಗಮ ಮಂಡಳಿಗಳ ಅಧ್ಯಕ್ಷರಿಗೆ ಮಾಸಿಕ ರೂ. 40,000/- ಗೌರವಧನವನ್ನು ನಿಗಧಿಪಡಿಸಲಾಗಿದೆ. ಮುಂದುವರೆದು ಬೆಂಗಳೂರು ನಗರದಲ್ಲಿ ವಾಸವಿದ್ದರೆ ರೂ. 25,000/- ಹಾಗೂ ಇತರೆ ನಗರ ಪ್ರದೇಶಗಳಲ್ಲಿ ವಾಸವಿದ್ದಲ್ಲಿ ರೂ. 15,000/- ಮನೆ ಬಾಡಿಗೆ ಭತ್ಯೆಯನ್ನು ನಿಗಧಿಪಡಿಸಲಾಗಿರುತ್ತದೆ.<br><br>ಒಂದು ಬಾರಿಗೆ ರೂ. 30,000/- ಮೌಲ್ಯದ ಪೀಠೋಪಕರಣಗಳನ್ನು ಖರೀದಿಸಲು ಹಾಗೂ ವಾಹನವನ್ನು ಬಾಡಿಗೆಗೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಆಯಾ ನಿಗಮ ಮಂಡಳಿಯ ಮುಖ್ಯ ಕಾರ್ಯ ನಿರ್ವಾಹಕ (Chief Executive) ರಿಗೆ ನಿಗಧಿಪಡಿಸಿರುವ ದರಗಳಂತೆ ನಿಗಮ ಮಂಡಳಿಗಳ ಅಧ್ಯಕ್ಷರ ನಿವಾಸಕ್ಕೆ ದೂರವಾಣಿ ಸೌಲಭ್ಯವನ್ನು ಹಾಗೂ ಮೊಬೈಲ್ ಸೌಲಭ್ಯವನ್ನು ನಿಗಧಿಪಡಿಲಾಗಿದೆ.<br><br>ಆಯಾ ನಿಗಮ ಮಂಡಳಿಯಲ್ಲಿ ನಿಗಧಿಪಡಿಸಿರುವ ನಿಯಮಗಳನುಸಾರ ಅಧ್ಯಕ್ಷರುಗಳು ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.<br><br>ಮುಂದುವರೆದು, ಸಚಿವ ಸ್ಥಾನಮಾನ ಹೊಂದಿರುವ ನಿಗಮ ಮಂಡಳಿಗಳಲ್ಲಿನ ಅಧ್ಯಕ್ಷರುಗಳಿಗೆ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 95 ಶಿಸನೇ 2020, ದಿನಾಂಕ 7-10-2020 ರನ್ವಯ ವೇತನ ಸೌಲಭ್ಯ ಹಾಗೂ ಇತರೆ ಭತ್ಯೆಗಳನ್ನು ನೀಡಲಾಗುತ್ತಿದೆ. **(ಅನುಬಂಧ-2)** |
| ಇ) | ಈ ನಿಗಮ ಹಾಗೂ ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಕಾರ್ಯದರ್ಶಿ, ವಿಶೇಷ ಕರ್ತವ್ಯಾಧಿಕಾರಿ, ಆಪ್ತ ಸಹಾಯಕರು ಹಾಗೂ ಇತರೆ ಸಿಬ್ಬಂದಿಗಳಿಗೆ ನಿಗದಿಪಡಿಸಿರುವ ಸಂಬಳದ ಹಾಗೂ ಇತರೆ ಭತ್ಯೆಗಳ ಕುರಿತು ಮಾಹಿತಿ ನೀಡುವುದು: | ನಿಗಮ ಹಾಗೂ ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಶಾಖೆಗೆ ನಿಯೋಜನ ಮೇರೆಗೆ ಸರ್ಕಾರಿ ನೌಕರನ್ನು ನೇಮಿಸಿದಲ್ಲಿ ಅವರು ಪಡೆಯುತ್ತಿರುವ ಸ್ವಂತ ವೇತನ ಶ್ರೇಣಿಯನುಸಾರ ಅವರಿಗೆ ವೇತನ ಪಾವತಿಸಲಾಗುತ್ತದೆ.<br><br>ಮುಂದುವರೆದು, ಸುತ್ತೋಲೆ ಸಂಖ್ಯೆ ಸಾಅಇ 05 ಎಆರ್‌ಯು 2021, ದಿನಾಂಕ 3-2-2021ರಲ್ಲಿ ಈ ಕೆಳಕಂಡಂತೆ ಸೂಚಿಸಲಾಗಿದೆ : |

<table>
<tr>
<td></td>
<td></td>
<td>(ಎ) ನಿಗಮ, ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಶಾಖೆಗೆ ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಂಡಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಇ 51 ಎಲ್‌ಡಬ್ಲ್ಯೂಎ 2017, ದಿನಾಂಕ 29-12-2017ರಲ್ಲಿ ನಿರ್ದೇಶಿಸಿರುವಂತೆ ಕನಿಷ್ಠ ವೇತನವನ್ನು ಲೆಕ್ಕ ಹಾಕುವಾಗ ಆಯಾ ಉದ್ದಿಮೆಗಳಿಗ ಅನ್ವಯವಾಗುವ ಸರ್ಕಾರದ ಅಧಿಸೂಚನೆಗಳನ್ನು ಅನುಪಾಲಿಸುವಂತೆ ತಿಳಿಸಲಾಗಿದೆ ಹಾಗೂ ವ್ಯತ್ಯಸ್ಥ ತುಟ್ಟಿಭತ್ಯೆ (Variable Dearness Allowance) ಯನ್ನು ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಲೆಕ್ಕಾಚಾರ ಮಾಡಿ ನಿಗದಿಪಡಿಸಿರುವ ಕನಿಷ್ಠ ವೇತನದ ದರಕ್ಕೆ ಕೂಡಿಸಿ ಒಟ್ಟು ವೇತನವನ್ನು ನಿಗಧಿಪಡಿಸುವಂತೆಯೂ ಹಾಗೂ ;<br><br>(ಬಿ) ಸರ್ಕಾರದ ಸದರಿ ಅಧಿಸೂಚನೆಗಳಲ್ಲಿ ನಿಗಧಿಪಡಿಸಿರುವ ಕನಿಷ್ಠ ದರಗಳು ತಳಮಟ್ಟದ ದರಗಳಾಗಿರಬೇಕು. ಸದರಿ ಕನಿಷ್ಠ ದರಗಳಿಗಿಂತ ಹೆಚ್ಚಿನ ದರಗಳಲ್ಲಿ ನಿಗಧಿಪಡಿಸುವಲ್ಲಿ ಸಾರ್ವಜನಿಕ ಉದ್ದಿಮೆಗಳು ಸ್ವತಂತ್ರವಾಗಿವೆ.</td>
</tr>
<tr>
<td>ಈ)</td>
<td>ನಿಗಮ, ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಸಿಬ್ಬಂದಿಗಳು ಹಾಗೂ ಶಾಸಕರುಗಳ ಆಪ್ತ ಸಹಾಯಕರುಗಳಿಗ ಒಂದೇ ರೀತಿಯ ವೇತನ ನಿಗದಿಪಡಿಸಲಾಗಿದೆಯೇ; ಇಲ್ಲವಾದ್ದಲ್ಲಿ, ಈ ತಾರತಮ್ಯವನ್ನು ಸರಿದೂಗಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು; ಆಪ್ತ ಸಹಾಯಕರೆಲ್ಲರಿಗೂ ಒಂದೇ ರೀತಿಯ ವೇತನ ನಿಗಿದಿಪಡಿಸಲು ಸರ್ಕಾರವು ಯಾವ ಕ್ರಮಕೈಗೊಳ್ಳಲಿದೆ;</td>
<td>ಶಾಸಕರುಗಳ ಆಪ್ತ ಸಹಾಯಕರುಗಳಿಗೆ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಕರ್ನಾಟಕ ನಾಗರೀಕ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2024ರನ್ವಯ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಸಹಾಯಕ / ಪ್ರಥಮ ದರ್ಜೆ ಸಹಾಯಕ, ಶೀಘ್ರಲಿಪಿಗಾರರು, ಕಿರಿಯ ಸಹಾಯಕ / ದ್ವಿತೀಯ ದರ್ಜೆ ಸಹಾಯಕ ಹಾಗೂ ಬೆರಳಚ್ಚುಗಾರರ ಹುದ್ದೆಗಳ ಕಾಲಿಕ ವೇತನ ಶ್ರೇಣಿಯ ಕನಿಷ್ಠ ಮೂಲವೇತನವನ್ನು ಸಂಚಿತ ಸಂಭಾವನೆಯಾಗಿ ದಿನಾಂಕ 1-11-2024 ರಿಂದ ಜಾರಿಗೆ ಬರುವಂತೆ ನಿಗಧಿಪಡಿಸಲಾಗಿದೆ.<br><br>ಆದರೆ, ನಿಗಮ, ಮಂಡಳಿಗಳ ಅಧ್ಯಕ್ಷರುಗಳ ಆಪ್ತ ಸಿಬ್ಬಂದಿಗಳಿಗೆ ಸುತ್ತೋಲೆ ಸಂಖ್ಯೆ ಸಾಉಇ 05 ಎಆರ್‌ಯು 2021, ದಿನಾಂಕ 3-2-2021ರಲ್ಲಿ ತಿಳಿಸಿರುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ ಕಾಇ 51 ಎಲ್‌ಡಬ್ಲ್ಯೂಎ 2017, ದಿನಾಂಕ 29-12-2017ರಲ್ಲಿ ನಿರ್ದೇಶಿಸಿರುವಂತೆ ಕನಿಷ್ಠ ವೇತನವನ್ನು ಲೆಕ್ಕಹಾಕುವಾಗ ಆಯಾ ಉದ್ದಿಮೆಗಳಿಗೆ ಅನ್ವಯವಾಗುವ ಸರ್ಕಾರದ ಅಧಿಸೂಚನೆಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.</td>
</tr>
<tr>
<td>ಉ)</td>
<td>ರಾಜ್ಯ ಸಂಪುಟ ದರ್ಜೆ ಹಾಗೂ ರಾಜ್ಯ ಸಚಿವ ಸ್ಥಾನಮಾನಕ್ಕೆ ಇರುವ ವ್ಯತ್ಯಾಸವೇನು; ಈ ಹುದ್ದೆಗಳನ್ನು ಹೊಂದಿರುವ ಗಣ್ಯರಿಗೆ ನೀಡಲಾಗುವ ಆಪ್ತ ಸಿಬ್ಬಂದಿಗಳಿಗೆ ನಿಗದಿಪಡಿಸಿರುವ ವೇತನ ಹಾಗೂ ಭತ್ಯೆಗಳಾವುವು? (ವಿವರವಾದ ಮಾಹಿತಿ ನೀಡುವುದು)</td>
<td>ರಾಜ್ಯ ಸಂಪುಟ ದರ್ಜೆ ಹಾಗೂ ರಾಜ್ಯ ಸಚಿವ ಸ್ಥಾನಮಾನಕ್ಕೆ ಇರುವ ವ್ಯತ್ಯಾಸ ಈ ಕೆಳಕಂಡಂತಿದೆ.<br><br>
<table>
<tr><th>ವಿವರ</th><th>ಸಂಪುಟ ದರ್ಜೆ ಸ್ಥಾನಮಾನ</th><th>ರಾಜ್ಯ ಸಚಿವ ಸ್ಥಾನಮಾನ</th></tr>
<tr><td>ವೇತನ</td><td>ರೂ. 1,25,000/-</td><td>ರೂ. 75,000/-</td></tr>
<tr><td>ಸಂಚಿತ ವೇತನ</td><td>ರೂ.5,00,000/- (ವಾರ್ಷಿಕ)</td><td>ರೂ. 3,00,000/- (ವಾರ್ಷಿಕ)</td></tr>
<tr><td>ಮನೆಬಾಡಿಗೆ ಭತ್ಯೆ</td><td>ರೂ. 40,000/-</td><td>ರೂ. 40,000/-</td></tr>
<tr><td>ಪೆಟ್ರೋಲ್</td><td>500ಲೀ.</td><td>500ಲೀ.</td></tr>
</table>
</td>
</tr>
</table>

| | | |
|---|---|---|
| | | ಶಾಸಕರುಗಳ ಆಪ್ತ ಸಹಾಯಕರುಗಳಿಗೆ 7ನೇ ವೇತನ ಆಯೋಗದ ಶಿಫಾರಸ್ಸಿನಂತೆ ಕರ್ನಾಟಕ ನಾಗರೀಕ ಸೇವೆಗಳು (ಪರಿಷ್ಕೃತ ವೇತನ) ನಿಯಮಗಳು, 2024ರನ್ವಯ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಸಹಾಯಕ / ಪ್ರಥಮ ದರ್ಜೆ ಸಹಾಯಕ, ಶೀಘ್ರಲಿಪಿಗಾರರು, ಕಿರಿಯ ಸಹಾಯಕ / ದ್ವಿತೀಯ ದರ್ಜೆ ಸಹಾಯಕ ಹಾಗೂ ಬೆರಳಚ್ಚುಗಾರರ ಹುದ್ದೆಗಳ ಕಾಲಿಕ ವೇತನ ಶ್ರೇಣಿಯ ಕನಿಷ್ಠ ಮೂಲವೇತನವನ್ನು ಸಂಚಿತ ಸಂಭಾವನೆಯಾಗಿ ದಿನಾಂಕ 1-11-2024 ರಿಂದ ಜಾರಿಗೆ ಬರುವಂತೆ ನಿಗಧಿಪಡಿಸಲಾಗಿದೆ. |

**ಕಡತ ಸಂಖ್ಯೆ: ಸಿಆಸುಇ 290 ರಾಸ 2025**

(ಸಿದ್ಧರಾಮಯ್ಯ)
ಮುಖ್ಯಮಂತ್ರಿ

## ಅನುಬಂಧ-1

### ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 531 (590)ಕ್ಕೆ ಮಾಹಿತಿ

| ಕ್ರ.ಸಂ. | ಇಲಾಖಾವಾರು ನಿಗಮ ಮಂಡಳಿ |
|---|---|
| | **ಕೃಷಿ ಇಲಾಖೆ** |
| 1. | ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ |
| 2. | ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ ನಿಗಮ ನಿಯಮಿತ.ಕಲಬುರಗಿ |
| | **ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ** |
| 3. | ಕರ್ನಾಟಕ ಸಹಕಾರ ಒಕ್ಕೂಟ ಮಹಾಮಂಡಳಿ |
| 4. | ಕರ್ನಾಟಕ ಸಹಕಾರ ಹಾಲು ಒಕ್ಕೂಟ ನಿಯಮಿತ |
| 5. | ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ |
| 6. | ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ ಮಂಗಳೂರು. |
| | **ಸಹಕಾರ ಇಲಾಖೆ** |
| 7. | ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ |
| 8. | ಕರ್ನಾಟಕ ರಾಜ್ಯ ಉಗ್ರಾಣ ನಿಗಮ ನಿಯಮಿತ |
| | **ಪರಿಸರ ಮತ್ತು ಜೀವಿಶಾಸ್ತ್ರ** |
| 9. | ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ |
| 10. | ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ |
| 11. | ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕ ನಿಗಮ ನಿಯಮಿತ, ಬೆಂಗಳೂರು |
| 12. | ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತ |
| | **ಇಂಧನ ಇಲಾಖೆ** |
| 13. | ಕೆಪಿಟಿಸಿಎಲ್ |
| 14. | ಕೆಪಿಸಿಎಲ್ |
| 15. | ಕ್ರೆಡೆಲ್ |
| 16. | ಕವಿಕ |
| 17. | ಎಂಇಐ |
| 18. | ವಿದ್ಯುತ್ ಪರಿವೀಕ್ಷಣಾಲಯ |
| 19. | ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ |
| 20. | ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ ನಿಯಮಿತ |
| 21. | ಚಾವಿಸನಿನಿ |
| 22. | ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿಮಿಟೆಡ್. |
| | **ಆರ್ಥಿಕ ಇಲಾಖೆ** |
| 23. | ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ |
| | **ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ** |
| 24. | ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತ |
| | **ಒಳಾಡಳಿತ** |
| 25. | ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ |
| | **ತೋಟಗಾರಿಕೆ** |
| 26. | ಕರ್ನಾಟಕ ರಾಜ್ಯ ಸಹಕಾರಿ ತೋಟಗಾರಿಕೆ ಮಾರಾಟ ಮಹಾಮಂಡಳಿ (ನಿ) |
| 27. | ಕರ್ನಾಟಕ ದ್ರಾಕ್ಷಿ ಮತ್ತು ವೈನ್ ಬೋರ್ಡ್ |
| 28. | ಕರ್ನಾಟಕ ರಾಜ್ಯ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ ಹುಬ್ಬಳ್ಳಿ |
| 29. | ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ |
| 30. | ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ನಿಯಮಿತ |
| 31. | ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿಯಮಿತ |
| | **ವಸತಿ** |
| 32. | ಕರ್ನಾಟಕ ಗೃಹ ಮಂಡಳಿ |
| 33. | ರಾಜೀವ್‌ಗಾಂಧಿ ಹೌಸಿಂಗ್ ಕಾರ್ಪೋರೇಷನ್ ಲಿಮಿಟೆಡ್ |
| 34. | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ |
| 35. | ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ |



ile No. DPAR/290/RASA/2025-DPAR_POL_COORD-DPAR (Computer No. 1986021)
ienerated from eOffice by SHARADA ANTARAGOND, DPAR-POL-SA(SA) INC, SENIOR ASSISTANT, DEPARTMENT OF PERSONNEL & ADMINISTRATIVE REF

| | |
|---|---|
| | **ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ** |
| 36. | ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ |
| | **ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ** |
| 37. | ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ |
| 38. | ಮೈಸೂರು ಪೇಂಟ್ಸ್ ವಾರ್ನಿಷ್ ಲಿಮಿಟೆಡ್ |
| 39. | ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ & ಅಡ್ವರ್ಟೈಸಿಂಗ್ |
| 40. | ಮೈಸೂರು ಸೇಲ್ಸ್ ಇಂಟರ್ನ್ಯಾಷನಲ್ ಲಿಮಿಟೆಡ್ |
| 41. | ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಶನ್ ಲಿಮಿಟೆಡ್ |
| 42. | ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ |
| 43. | ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ |
| 44. | ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ |
| 45. | ಕರ್ನಾಟ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಲಿಮಿಟೆಡ್ |
| 46. | ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮ ಲಿಮಿಟೆಡ್ |
| 47. | ಮೈಸೂರು ಸಕ್ಕರೆ ಕಂಪನಿ ಲಿಮಿಟೆಡ್ ಮಂಡ್ಯ |
| 48. | ತುಮಕೂರು ಮಷಿನ್ ಟೂಲ್ ಪಾರ್ಕ್, ಬೆಂಗಳೂರು.(ವಿಶೇಷ ಉದ್ದೇಶಿತ ವಾಹನ SPV) |
| | **ಜಲ ಸಂಪನ್ಮೂಲ** |
| 49. | ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ |
| 50. | ಕಾವೇರಿ ನೀರಾವರಿ ನಿಗಮ ನಿಯಮಿತ |
| 51. | ವಿಶ್ವೇಶ್ವರಯ್ಯ ನೀರಾವರಿ ನಿಗಮ ನಿಯಮಿತ |
| 52. | ಕರ್ನಾಟಕ ನೀರಾವರಿ ನಿಗಮ ನಿಯಮಿತ |
| | **ಅಲ್ಪ ಸಂಖ್ಯಾತರ ಕಲ್ಯಾಣ** |
| 53. | ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ |
| 54. | ಕರ್ನಾಟಕ ರಾಜ್ಯ ವಕ್ಫ್ ಬೋರ್ಡ್ |
| | **ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ** |
| 55. | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಕಲಬುರ್ಗಿ |
| 56. | ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗ |
| 57. | ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ |
| | **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್** |
| 58. | **ಕರ್ನಾಟಕ ಗ್ರಾಮೀಣ ಅರತ ಸೌಕರ್ಯ ಅಭಿವೃದ್ಧಿ ನಿಯಮಿತ** |
| | **ಸಮಾಜ ಕಲ್ಯಾಣ** |
| 59. | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ |
| 60. | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ |
| 61. | ಡಾ|| ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ |
| 62. | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಲೆಮಾರಿ ಅಭಿವೃದ್ಧಿ ನಿಗಮ, ಬೆಂಗಳೂರು |
| 63. | ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ |
| 64. | ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ |
| | **ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ** |
| 65. | ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ |
| 66. | ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮ |
| | **ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ** |
| 67. | ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ |
| 68. | ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು |
| | **ಪ್ರವಾಸೋದ್ಯಮ** |
| 69. | ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು |
| 70. | ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ |
| 71. | ಅರಣ್ಯ ಮತ್ತು ವಿಹಾರ ಧಾಮಗಳ ಸಂಸ್ಥೆ |
| 72. | ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಗಮ ನಿಯಮಿತ |
| | **ಸಾರಿಗೆ** |
| 73. | ಕೆ.ಎಸ್.ಆರ್.ಟಿ.ಸಿ. |
| 74. | ಬಿ.ಎಂ.ಟಿ.ಸಿ., |
| 75. | ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ |



File No. DPAR/290/RASA/2025-DPAR_POL_COORD-DPAR (Computer No. 1986021)
Generated from eOffice by SHARADA ANTARAGOND, DPAR-POL-SA(SA) INC, SENIOR ASSISTANT, DEPARTMENT OF PERSONNEL & ADMINISTRATIVE RE

| | |
|---|---|
| 76. | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲ್ಬುರ್ಗಿ |
| 77. | ದೇವರಾಜ ಅರಸು ಟ್ರಕ್ ಟರ್ಮಿನಲ್ ಲಿಮಿಟೆಡ್, ಶಾಂತಿನಗರ |
| | **ನಗರಾಭಿವೃದ್ಧಿ** |
| 78. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| 79. | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| 80. | ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ |
| 81. | ಕರ್ನಾಟಕ ನಗರ ಮೂಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ |
| 82. | ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| 83. | ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ |
| 84. | ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ |
| 85. | ದಾವಣಗೆರೆ ಸ್ಮಾರ್ಟ್ ಸಿಟಿ ಲಿಮಿಟೆಡ್ |
| 86. | ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ |
| 87. | ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ |
| | **ಮೂಲಸೌಲಭ್ಯ ಅಭಿವೃದ್ಧಿ** |
| 88. | ಕರ್ನಾಟಕ ಜಲಸಾರಿಗೆ ಮಂಡಳಿ (KARNATAKA MARITIME BOARD) |
| 89. | ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ (KSIIDC) |
| 90. | ರೈಲು ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಕಂಪನಿ (ಕರ್ನಾಟಕ) ಲಿಮಿಟೆಡ್ |
| 91. | ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ (ಕರ್ನಾಟಕ ಸರ್ಕಾರದ ಉದ್ಯಮ) |
| | **ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ** |
| 92. | ಕರ್ನಾಟಕ ರಾಜ್ಯ ಮದ್ಯಪಾನ ಸ್ವಯಂ ಮಂಡಳಿ |
| 93. | ಶ್ರೀ ಕಂಠೀರವ ಸ್ಟುಡಿಯೋಸ್ ನಿಯಮಿತ |
| | **ಮಹಿಳೆಯ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಇಲಾಖೆ** |
| 94. | ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ |
| | **ಕಾರ್ಮಿಕ ಇಲಾಖೆ** |
| 95. | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ |
| | **ರೇಷ್ಮೆ** |
| 96. | ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ |
| | **ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ** |
| 97. | ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ |
| 98. | ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ. |
| | **ಜಾಗೃತ ವಿಭಾಗ** |
| 99. | ಕರ್ನಾಟಕ ಲೋಕಾಯುಕ್ತ ಆಯೋಗ. |
| | **ಕಂದಾಯ ಇಲಾಖೆ** |
| 100. | ಕರ್ನಾಟಕ ರಾಜ್ಯ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ |



File No. DPAR/290/RASA/2025-DPAR_POL_COORD-DPAR (Computer No. 1986021)
Generated from eOffice by SHARADA ANTARAGOND, DPAR-POL-SA(SA) INC, SENIOR ASSISTANT, DEPARTMENT OF PERSONNEL & ADMINISTRATIVE REI

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಚಿವರ ಸ್ಥಾನಮಾನವನ್ನು ಹೊಂದಿರುವ ಕಾರ್ಯನಿರ್ವಾಹಕ / ಪ್ರಾಧಿಕಾರಗಳಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಪರಿಷ್ಕೃತ ಆದೇಶ.

*****

**ಪ್ರಸ್ತಾವನೆ:**

ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ರಾಜ್ಯದ ಸಂಪೂರ್ಣ ಸಾಮರ್ಥ್ಯವನ್ನು ಸಂಪೂರ್ಣ ಸದ್ಬಳಕೆ ಮಾಡುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರವು ವಿವಿಧ ಆಯೋಗ/ ಸಮಿತಿ/ ಪ್ರಾಧಿಕಾರ/ ಮಿಷನ್/ಕಾರ್ಯಪಡೆಗಳನ್ನು ಹೊಸದಾಗಿ ರಚಿಸಿದ್ದು, ಅಧ್ಯಕ್ಷರುಗಳನ್ನು ನೇಮಿಸಿ ಅವರುಗಳಿಗೆ ಸೂಕ್ತ ಸ್ಥಾನಮಾನವನ್ನು ಸಹ ನೀಡಲಾಗಿದೆ. ಈ ಕಾರ್ಯನಿರ್ವಾಹಕರು/ ಪ್ರಾಧಿಕಾರಿಗಳ ವೆಚ್ಚಗಳನ್ನು ಸಂಬಂಧಪಟ್ಟ ಆಡಳಿತಾತ್ಮಕ ಇಲಾಖೆಗಳು ಭರಿಸುತ್ತಿರುವುದರಿಂದ ಈ ಕಾರ್ಯನಿರ್ವಾಹಕರು/ ಪ್ರಾಧಿಕಾರಿಗಳಿಗೆ ನೀಡಬೇಕಾದ ಸೌಲಭ್ಯಗಳ ಬಗ್ಗೆ ಇಲಾಖೆಗಳು ಸ್ಪಷ್ಟೀಕರಣಗಳನ್ನು ಕೋರಿರುವುದರ ಹಿನ್ನೆಲೆಯಲ್ಲಿ ಕಾರ್ಯನಿರ್ವಾಹಕರು / ಪ್ರಾಧಿಕಾರಗಳಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವುದು ಅಗತ್ಯವೆಂದು ಮನಗಂಡು ಸಂಬಂಧಪಟ್ಟಂತೆ ಈ ಹಿಂದೆ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ಹಾಗೂ ಸುತ್ತೋಲೆಗಳನ್ನು ಕ್ರೋಢೀಕರಿಸಿ ಒಂದೇ ಆದೇಶವನ್ನು ಈ ಕೆಳಕಂಡಂತೆ ಹೊರಡಿಸಲಾಗಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 95 ಶಿಸನೀ 2020, ಬೆಂಗಳೂರು, ದಿನಾಂಕ:07.10.2020</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಸಚಿವರ ಸ್ಥಾನಮಾನವನ್ನು ಹೊಂದಿರುವ ಕಾರ್ಯನಿರ್ವಾಹಕ ಅಥವಾ ಪ್ರಾಧಿಕಾರಗಳು / ಆಯೋಗ/ ಸಮಿತಿ/ ಮಿಷನ್/ ಕಾರ್ಯಪಡೆಗಳು ಈ ಕೆಳಕಂಡಂತೆ ಸೌಲಭ್ಯಗಳನ್ನು ಹೊಂದತಕ್ಕದೆಂದು ಆದೇಶಿಸಿದೆ.

1) **ವೇತನ ಮತ್ತು ಭತ್ಯೆಗಳು:** ಕಾರ್ಯಕಾರಿ ಆದೇಶದ ಮೇರೆಗೆ ಸಚಿವರ, ರಾಜ್ಯ ಸಚಿವರ, ಉಪ ಸಚಿವರ ಸ್ಥಾನಮಾನ ನೀಡಿರುವ ಯಾವುದೇ ಕಾರ್ಯನಿರ್ವಾಹಕ ಪ್ರಾಧಿಕಾರವು 1956ರ ಕರ್ನಾಟಕ ಸಚಿವರುಗಳ ವೇತನ ಮತ್ತು ಭತ್ಯೆಗಳ ಅಧಿನಿಯಮ ಹಾಗೂ ಸಂಬಂಧಪಟ್ಟ ನಿಯಮಾವಳಿಯನ್ವಯ ವೇತನ, ಭತ್ಯೆ ಇತ್ಯಾದಿಗಳನ್ನು ಪಡೆಯಲು ಅರ್ಹರಿರುತ್ತಾರೆ.

2) **ಮನೆ ಬಾಡಿಗೆ:** ಅಂತಹ ಕಾರ್ಯನಿರ್ವಾಹಕ ಪ್ರಾಧಿಕಾರವು ತಮ್ಮ ಅಧಿಕಾರಾವಧಿಯಲ್ಲಿ ಬೆಂಗಳೂರು ನಗರದಲ್ಲಿ ಒಂದು ಸುಸಜ್ಜಿತ ನಿವಾಸವನ್ನು ಹೊಂದಲು ಅಥವಾ ಸುಸಜ್ಜಿತ ನಿವಾಸದ ಬದಲಿಗೆ ಬೆಂಗಳೂರು ನಗರದಲ್ಲಿ ಮಾಸಿಕ ರೂ.20,000 ಅಥವಾ ಇತರೆ ನಗರಗಳಲ್ಲಿ ಮಾಸಿಕ ರೂ. 15,000 ಮನೆ ಬಾಡಿಗೆ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಲೋಕೋಪಯೋಗಿ ಇಲಾಖೆಯ ಮೌಲ್ಯಮಾಪನಕ್ಕೆ ಒಳಪಟ್ಟು ಬೆಂಗಳೂರು ನಗರದಲ್ಲಿ ಮಾಸಿಕ ರೂ. 40,000 ಹಾಗೂ ಇತರೆ ನಗರಗಳಲ್ಲಿ ಮಾಸಿಕ ರೂ.20,000 ಗರಿಷ್ಠ ಬಾಡಿಗೆ ಮನೆಯನ್ನು ಪಡೆಯಬಹುದಾಗಿದೆ.

3) **ವಾಹನ ಸೌಕರ್ಯ & ಇಂಧನ ಭತ್ಯೆ:** ಕಾರ್ಯನಿರ್ವಾಹಕ ಪ್ರಾಧಿಕಾರವು ತಮ್ಮ ಅಧಿಕಾರಾವಧಿಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 03 ಶಿಸನೀ 2020 ದಿನಾಂಕ:12.06.2020 ರನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 271 ವೆಚ್ಚ 12/2020(ಇ–ಆಫೀಸ್) ದಿನಾಂಕ:03.06.2020 ರ ಸಹಮತಿಯ ಮೇರೆಗೆ ಸಂಬಂಧಪಟ್ಟ ಆಡಳಿತ ಇಲಾಖೆಯು ಆರ್ಥಿಕ ಇಲಾಖೆಯ ಅನುಮತಿಗೆ / ಸಹಮತಿಗೆ ಒಳಪಟ್ಟು ಹೊಸ ವಾಹನವನ್ನು ರೂ.20.00 ಲಕ್ಷಕ್ಕೆ ಮೀರದಂತೆ ಖರೀದಿಸಬಹುದು ಹಾಗೂ ಸಿಆಸು ಇಲಾಖೆಯಿಂದ ಅಧ್ಯಕ್ಷರುಗಳ ಉಪಯೋಗಕ್ಕಾಗಿ ತಾತ್ಕಾಲಿಕವಾಗಿ ನೀಡಿರುವ ವಾಹನಗಳನ್ನು ಆಡಳಿತ ಇಲಾಖೆಯಿಂದ ಹೊಸ ವಾಹನಗಳನ್ನು ಖರೀದಿಸಿದ ನಂತರ ಕುಮಾರ ಕೃಪ ಆತಿಥ್ಯಕ್ಕೆ ಹಿಂದಿರುಗಿಸತಕ್ಕದ್ದು.



File No. DPAR/26 [illegible]
Generated from eOffice by [illegible]

ಸದರಿ ಅಧ್ಯಕ್ಷರುಗಳು ಮಾಸಿಕ 550 ಲೀಟರ್‌ಗೆ ಸಮಾನವಾದ ಇಂಧನ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಹಾಗೂ ಅಧ್ಯಕ್ಷರುಗಳು ತಮ್ಮ ವಾಹನಗಳಿಗೆ ಕೆಂಪು ದೀಪವನ್ನು ಅಳವಡಿಸುವಂತಿಲ್ಲ.

4) ಆಪ್ತ ಸಿಬ್ಬಂದಿ: ಕಾರ್ಯನಿರ್ವಾಹಕ ಪ್ರಾಧಿಕಾರಗಳು ಈ ಕೆಳಕಂಡಂತೆ ಆಪ್ತ ಸಿಬ್ಬಂದಿಯನ್ನು ಹೊಂದಬಹುದು.

ಅ) ಆಪ್ತ ಕಾರ್ಯದರ್ಶಿ – 1 ಹುದ್ದೆ

ಆ) 'ಸಿ' ವೃಂದ – 2 ಹುದ್ದೆಗಳು

ಇ) 'ಡಿ' ವೃಂದ – 2 ಹುದ್ದೆಗಳು

ಈ) ವಾಹನ ಚಾಲಕ – 1 ಹುದ್ದೆ

ಈ ಹುದ್ದೆಗಳನ್ನು ನಿಯೋಜನೆ ಮೂಲಕ ತುಂಬತಕ್ಕದ್ದು, ಅಧ್ಯಕ್ಷರುಗಳು ಇಚ್ಛಿಸುವ ವ್ಯಕ್ತಿಗಳನ್ನು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಉದ್ದಿಮೆಗಳು ಅಥವಾ ಕೇಂದ್ರ ಸರ್ಕಾರ ಉದ್ದಿಮೆಗಳು ಅಥವಾ ಸ್ವಾಯತ್ತ ಸಂಸ್ಥೆಗಳು, ನಿಗಮ ಅಥವಾ ಸ್ಥಳೀಯ ಸಂಸ್ಥೆಗಳು ಇತ್ಯಾದಿಗಳಿಂದ ನಿಯೋಜನೆ ಮೂಲಕ ಪಡೆಯಬಹುದು. ಈ ನೇಮಕಾತಿಯು ಅಧ್ಯಕ್ಷರ ಅವಧಿಯೊಂದಿಗೆ ಮುಕ್ತಾಯಗೊಳ್ಳುವುದು.

ಮೇಲೆ ತಿಳಿಸಿರುವಂತೆ ಆಪ್ತ ಕಾರ್ಯದರ್ಶಿ ಹುದ್ದೆಯನ್ನು ಗ್ರೂಪ್ –ಎ ಅಥವಾ ಗ್ರೂಪ್ –ಬಿ ಶ್ರೇಣಿಯ ಅಧಿಕಾರಿಗಳನ್ನು ನಿಯೋಜನೆ ಮೂಲಕ ಭರ್ತಿ ಮಾಡಿಕೊಳ್ಳತಕ್ಕದ್ದು. ಉಳಿದ ಸಿಬ್ಬಂದಿ ಅಂದರೆ ಗ್ರೂಪ್ –ಸಿ ಮತ್ತು ಗ್ರೂಪ್ –ಡಿ ವರ್ಗದ ನೌಕರರನ್ನು ಆಡಳಿತ ಹಾಗೂ ಇನ್ನಿತರ ಇಲಾಖೆಗಳಲ್ಲಿ ಸೂಕ್ತ ಸಿಬ್ಬಂದಿ ಇಲ್ಲದಿದ್ದ ಪಕ್ಷದಲ್ಲಿ ಗುತ್ತಿಗೆ ಆಧಾರದ ಮೇಲೆ ಅಧ್ಯಕ್ಷರ ಕಾರ್ಯಾವಧಿವರೆಗೆ ಮಾತ್ರ ನೇಮಿಸಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯ ಉದ್ದಿಮೆಗಳ ಮಹೋದ್ಯಮದ ಮಾರ್ಗಸೂಚಿಗಳು (ಅಧ್ಯಕ್ಷರಿಗೆ ಆಪ್ತ ಸಿಬ್ಬಂದಿಗಳನ್ನು ನೀಡುವ ಬಗ್ಗೆ) ಅನ್ವಯಿಸುವುದಿಲ್ಲ. ಹಾಗೂ ಮೇಲೆ ನಿಗಧಿಪಡಿಸುವ ಸಿಬ್ಬಂದಿ ಮಾದರಿಯು ಅನ್ವಯಿಸುತ್ತದೆ.

5) ದೂರವಾಣಿ: ಕಾರ್ಯನಿರ್ವಾಹಕ ಪ್ರಾಧಿಕಾರದ ಅಧಿಕೃತ ಉಪಯೋಗಕ್ಕಾಗಿ ಒಂದು ನಿವಾಸ ದೂರವಾಣಿಯನ್ನು ಅವರ ಸ್ವಂತ ಗೃಹದಲ್ಲಿ ಅಥವಾ ಬಾಡಿಗೆ ಮೇಲೆ ಪಡೆದ ನಿವಾಸದಲ್ಲಿ ಒದಗಿಸತಕ್ಕದ್ದು.

6) ಪ್ರವಾಸಭತ್ಯೆ ಮತ್ತು ದಿನಭತ್ಯೆ: ಸಚಿವರುಗಳಿಗೆ ಅನ್ವಯಿಸುವ ಪ್ರವಾಸ ಭತ್ಯೆ ನಿಯಮಾವಳಿಯನ್ನು ಈ ಕಾರ್ಯನಿರ್ವಾಹಕ ಪ್ರಾಧಿಕಾರಗಳಿಗೆ ವಿಸ್ತರಿಸಬಹುದಾಗಿದೆ. ರಾಜ್ಯದ ಹೊರಗಡೆ ಪ್ರವಾಸವು ಸೇರಿದಂತೆ ಮಾಸಿಕ ಪ್ರವಾಸದ ಅವಧಿಯನ್ನು ಸಂಪುಟ ದರ್ಜೆ ಹಾಗೂ ರಾಜ್ಯ ಸಚಿವ ಸ್ಥಾನಮಾನ ಹೊಂದಿರುವ ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ಅನ್ವಯವಾಗುವಂತೆ ಅವರ ಕಾರ್ಯಭಾರದ ಆಧಾರದ ಮೇಲೆ ತಿಂಗಳಿಗೆ 20 ದಿವಸ ಪ್ರವಾಸ ಮಾಡಲು ಅನುಮತಿ ನೀಡಲಾಗಿದೆ. ಅವಶ್ಯವಿದ್ದಲ್ಲಿ ಮಾತ್ರ ರಾಜ್ಯದ ಹೊರಗಡೆ ಪ್ರವಾಸವನ್ನು ಕೈಗೊಳ್ಳತಕ್ಕದ್ದು.

7) ವೈದ್ಯಕೀಯ ವೆಚ್ಚ: ಕಾರ್ಯನಿರ್ವಾಹಕ ಪ್ರಾಧಿಕಾರಗಳ ಅಧ್ಯಕ್ಷರುಗಳು ವೈದ್ಯಕೀಯ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

...3



File No. DPAR/28…

8) ಇತರೆ: ಈ ಕಾರ್ಯನಿರ್ವಾಹಕ ಪ್ರಾಧಿಕಾರಗಳು ರಾಜ್ಯದ ಹೊರಗಡೆ ರಾಜ್ಯ ಅತಿಥಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ. ಮುಂದುವರೆದು, ಆದ್ಯತಾಪಟ್ಟಿಯಲ್ಲಿ ಈ ಕಾರ್ಯನಿರ್ವಾಹಕ : ಪ್ರಾಧಿಕಾರಗಳ ದರ್ಜೆಯು, ಇವರುಗಳು ಶಾಸಕರಾಗಿದ್ದಲ್ಲಿ "ವಿಧಾನಸಭಾ ಸದಸ್ಯರು. ವಿಧಾನ ಪರಿಷತ್ತಿನ ಸದಸ್ಯರು" ಅಡಿಯಲ್ಲಿ ಇರತಕ್ಕದ್ದು.

9) ಕಛೇರಿ ಸ್ಥಳಾವಕಾಶ: ವಿಧಾನಸೌಧ, ವಿಕಾಸ ಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಸ್ಥಳಾವಕಾಶ ಲಭ್ಯವಿಲ್ಲದಿದ್ದಲ್ಲಿ ಈ ಕಾರ್ಯನಿರ್ವಾಹಕ ಪ್ರಾಧಿಕಾರಗಳಿಗೆ ಅಗತ್ಯವಾದ ಕಛೇರಿ ಸ್ಥಳಾವಕಾಶವನ್ನು ಸಂಬಂಧಪಟ್ಟ ಆಡಳಿತ ಇಲಾಖೆಗಳ ವ್ಯಾಪ್ತಿಗೊಳಪಡುವ ಕಛೇರಿ ಕಟ್ಟಡಗಳಲ್ಲಿ ಒದಗಿಸತಕ್ಕದ್ದು. ಹಾಗೂ ಪೀಠೋಪಕರಣ ಲೇಖನ ಸಾಮಗ್ರಿ ಇನ್ನಿತರ ಯಂತ್ರೋಪಕರಣಗಳನ್ನು ಮತ್ತು ಇತ್ಯಾದಿ ಸೌಲಭ್ಯಗಳನ್ನು ಆಡಳಿತ ಇಲಾಖೆಗಳೇ ಒದಗಿಸತಕ್ಕದ್ದು. ಈ ಬಗ್ಗೆ ಸಂಪೂರ್ಣ ವೆಚ್ಚವನ್ನು ಸಂಬಂಧಪಟ್ಟ ಮಂಡಳಿ ನಿಗಮ ಇತ್ಯಾದಿಗಳು ಭರಿಸತಕ್ಕದ್ದು. ಹಾಗೂ ನಷ್ಟದಲ್ಲಿರುವ ಮಂಡಳಿ ನಿಗಮಗಳಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಆಡಳಿತ ಇಲಾಖೆಗಳು ಲಭ್ಯವಿರುವ ವಾರ್ಷಿಕ ಆಯವ್ಯದ ಅನುದಾನದಿಂದ ಆರ್ಥಿಕ ಸಹಾಯವನ್ನು ಒದಗಿಸುವ ಬಗ್ಗೆ ತೀರ್ಮಾನ ಕೈಗೊಳ್ಳತಕ್ಕದ್ದು. ಈ ಉದ್ದೇಶಕ್ಕಾಗಿ ಪ್ರತ್ಯೇಕವಾಗಿ ಹೆಚ್ಚುವರಿ ಆಯವ್ಯಯ ಅನುದಾನವನ್ನು ಮಂಜೂರು ಮಾಡಲಾಗುವುದಿಲ್ಲ. ಸರ್ಕಾರವು ಆಗಿಂದಾಗ್ಗೆ ಹೊರಡಿಸಿರುವ ಮಿತವ್ಯಯ ಆದೇಶವನ್ನು ಪಾಲಿಸಲು ಕ್ರಮ ಕೈಗೊಳ್ಳುವುದು. ಹಾಗೂ ಯಾವ ಉದ್ದೇಶಗಳಿಗೆ ಕಾರ್ಯಪಡೆ ರಚನೆಯಾಗಿದೆಯೋ ಆ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು ನಿಗಧಿಪಡಿಸಿದ ಅವಧಿಯೊಳಗೆ ಗುರಿ ಸಾಧಿಸಲು ಸಂಬಂಧಪಟ್ಟ ಆಡಳಿತ ಇಲಾಖೆಗಳು ಎಲ್ಲಾ ರೀತಿಯ ಸಹಕಾರ ಮಾಹಿತಿ ಹಾಗೂ ಸೌಲಭ್ಯಗಳನ್ನು ಒದಗಿಸತಕ್ಕದ್ದು.

ಸರ್ಕಾರವು ಈಗಾಗಲೇ ರಚಿಸಲಾಗಿರುವ ಹಾಗೂ ಮುಂದೆ ರಚಿಸಲಿರುವ ಇಂತಹ ಎಲ್ಲಾ ಕಾರ್ಯನಿರ್ವಾಹಕ ಪ್ರಾಧಿಕಾರಗಳಿಗೆ ಸಚಿವರ ಸ್ಥಾನಮಾನ ನೀಡಿದ ನಂತರ ಮೇಲ್ಕಂಡ ಸೌಲಭ್ಯಗಳು ಷರತ್ತು ಮತ್ತು ನಿಬಂಧನೆಗಳು ಅನ್ವಯವಾಗುತ್ತವೆ.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 820 ವೆಚ್ಚ-12/2011, ದಿನಾಂಕ: 01/12/2011 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮೊಹಮ್ಮದ ನಯೀಮ್ ಮೋಮಿನ್) ಕೆ.ಎ.ಸೇ
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು ಇಲಾಖೆ(ರಾಜ್ಯ ಶಿಷ್ಟಾಚಾರ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 300 ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು, (ಎ ಅಂಡ್ ಇ) / (ಆಡಿಟ್-1) (ಆಡಿಟ್-2) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

....4

3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.

4. ಎಲ್ಲಾ ಆಯೋಗ/ ಸಮಿತಿ/ ಪ್ರಾಧಿಕಾರ/ ಮಿಷನ್/ ಕಾರ್ಯಪಡೆಯ ಅಧ್ಯಕ್ಷರುಗಳಿಗೆ.

5. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-12, ವಿಧಾನಸೌಧ, ಬೆಂಗಳೂರು.

7. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

8. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.

9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.



File No. DPAR/20[illegible]

Generated from eOffice by [illegible]

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 67 ಶಿಸನೇ 2022.

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:02.11.2022.

## ತಿದ್ದುಪಡಿ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 95 ಶಿಸನೇ 2020, ಬೆಂಗಳೂರು, ದಿನಾಂಕ:07.10.2020 ರಲ್ಲಿ ಹೊರಡಿಸಿರುವ ಸರ್ಕಾರದ ಆದೇಶದ ನಾಲ್ಕನೇ ಅಂಶದಲ್ಲಿರುವ ಆಪ್ತ ಕಾರ್ಯದರ್ಶಿ ಹುದ್ದೆಯನ್ನು ನಿಯೋಜನೆ ಮೂಲಕ ಭರ್ತಿ ಮಾಡಿಕೊಳ್ಳತಕ್ಕದ್ದು ಎನ್ನುವ ಬದಲಾಗಿ, ನಿಯೋಜನೆ/ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳತಕ್ಕದ್ದು ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

T.V. Sunandamma 02/11/2022

(ಟಿ.ವಿ.ಸುನಂದಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆ
(ರಾಜ್ಯ ಶಿಷ್ಟಾಚಾರ).

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸಿಕೊಡಲು.

**ಪ್ರತಿ:**

1. ಮಹಾಲೇಖಪಾಲರು(ಎ ಅಂಡ್ ಇ)/(ಆಡಿಟ್-1)/ಆಡಿಟ್-2), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ/ಬಹುಮಹಡಿ ಕಟ್ಟಡ, ಬೆಂಗಳೂರು.
5. ಎಲ್ಲಾ ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಸರ್ಕಾರದ ಅಪರ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (1/2&3 ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ಐ.ಆರ್.ಎಲ್.ಎ/ಲೆಕ್ಕಪತ್ರ-1/2/3), ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಪರ ಕಾರ್ಯದರ್ಶಿ, ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆ(ರಾಜ್ಯ ಶಿಷ್ಟಾಚಾರ) ರವರ ಆಪ್ತ ಸಹಾಯಕರು, ವಿಧಾನಸೌಧ, ಬೆಂಗಳೂರು.
12. ವಿಶೇಷಾಧಿಕಾರಿಗಳು, ಕುಮಾರ ಕೃಪ ಅತಿಥಿ ಗೃಹ, ಹೈಗ್ರೌಂಡ್ಸ್, ಬೆಂಗಳೂರು.
13. ಪತ್ರಿಕಾ ವಿಭಾಗ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.



File No. DPAR/2[illegible]
Generated from eOffice by [illegible]